ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/13/ಸುತ್ತೋಲೆ/2016-17/ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 19.02.2018.

ಇವರಿಗೆ:-

ಜಂಟಿ ನಿರ್ದೇಶಕರು,
ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ,
ಬೆಂಗಳೂರು/ಮೈಸೂರು/ಧಾರವಾಡ
ಶಿವಮೊಗ್ಗ/ಮಂಗಳೂರು/ಗುಲ್ಬರ್ಗಾ.

ಮಾನ್ಯರೆ,

**ವಿಷಯ:** ಸರ್ಕಾರದ ಅಧಿಸೂಚನೆ / ಸುತ್ತೋಲೆಗಳನ್ನು ಪರಿಚಲಿಸುವ ಬಗ್ಗೆ.

** ** **

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಈ ಪತ್ರದೊಂದಿಗೆ ಲಗತ್ತಿಸಿರುವ ಸರ್ಕಾರದ ಪತ್ರ/ಅಧಿಸೂಚನೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳು ಹಾಗೂ ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಕ್ತ ಕ್ರಮಕ್ಕಾಗಿ ಪರಿಚಲಿಸುವಂತೆ ಸೂಚಿಸಲಾಗಿದೆ.

| ಕ್ರ. ಸಂ | ಪತ್ರಸಂಖ್ಯೆ | ವಿಷಯ |
|---|---|---|
| 1. | ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ:7: ಸೇಸವಿ:2017 ದಿನಾಂಕ:18.01.2018 | ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಸಂಘಗಳು ಸಲ್ಲಿಸಿದ ಮನವಿಗಳ ವಿಲೇವಾರಿ ಬಗ್ಗೆ |
| 2. | ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ:15 ಸೇವನೆ:2017 ದಿನಾಂಕ:16.12.2017 | ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ಕ್ಕೆ ತಿದ್ದುಪಡಿ |

ತಮ್ಮ ವಿಶ್ವಾಸಿ,

ಅಡಕ: ಮೇಲಿನಂತೆ

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳಿತಾಧಿಕಾರಿಗಳು

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-

1) ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ
2) ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಕಛೇರಿ ಪ್ರತಿ.

Enquiry

ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 15 ಸೇವನೆ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:16.12.2017

1786
8/1/2018

ಅಧಿಸೂಚನೆ

ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 05.07.2017ರ ಅಧಿಸೂಚನೆ ಸಂಖ್ಯೆ: ಸಿಆಸುಇ 15 ಸೇವನೆ 2017 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ:27.07.2017ರ ಕರ್ನಾಟಕ ರಾಜ್ಯಪತ್ರದ ಭಾಗ IV-A ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ:27.07.2017ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗಿದ್ದು ಅವುಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ ;

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ, 14)ರ 3ನೇ ಪ್ರಕರಣದ (1)ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

1. ಶೀರ್ಷಿಕೆ ಮತ್ತು ಪ್ರಾರಂಭ:- (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು, 2017 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ದಿನಾಂಕ: 22.03.2012ರಿಂದ ಜಾರಿಗೆ ಬಂದಿವೆಯೆಂದು ಭಾವಿಸತಕ್ಕದ್ದು.

2...

2. ನಿಯಮ 2ಕ್ಕೆ ತಿದ್ದುಪಡಿ:- ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012ರ ನಿಯಮ 2ರಲ್ಲಿ,

(ಎ) "ಸರ್ಕಾರವು ನಿಗದಿಪಡಿಸಿರುವ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು" ಎಂಬ ಪದಗಳ ನಂತರ "ಶೇಕಡಾ 50 ಅಂಕಗಳಿಗೆ ಕಡಿಮೆ ಇಲ್ಲದಂತೆ ಪಡೆದು" ಎಂಬ ಪದಗಳನ್ನು ಸೇರಿಸತಕ್ಕದ್ದು.

(ಬಿ) "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

3. ನಿಯಮ 3ಕ್ಕೆ ತಿದ್ದುಪಡಿ:- ಸದರಿ ನಿಯಮಗಳ ನಿಯಮ 3 ರಲ್ಲಿ ,-

(ಎ) ಉಪ ನಿಯಮ (1)ರಲ್ಲಿ,-

(i) "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ii) "ಆರು ವರ್ಷಗಳ" ಎಂಬ ಪದಗಳ ಬದಲಿಗೆ "ಒಂಭತ್ತು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ಬಿ) ಉಪ ನಿಯಮ (2)ರಲ್ಲಿ,- "ಐದು ವರ್ಷಗಳ" ಎಂಬ ಪದಗಳ ಬದಲಿಗೆ "ಎಂಟು ವರ್ಷಗಳ" ಎಂಬ ಪದಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Gayathri M.R
16.12.17

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 1000 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಬಿ)ಗೆ ಕಳುಹಿಸಿಕೊಡಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್–ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
14. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
16. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
17. ಸಚಿವಾಲಯದ ಎಲ್ಲಾ ಶಾಖೆಗಳು
18. ಸಚಿವ ಸಂಪುಟ ಶಾಖೆ
19. ಪತ್ರಿಕಾ ಪ್ರಕಟಣೆ
20. ವಾರದ ರಾಜ್ಯಪತ್ರ
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)

Enquiry

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಸಿಆಸುಇ 7 ಸೇಸವಿ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:18.01.2018.

<u>ಸುತ್ತೋಲೆ</u>

ವಿಷಯ: ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದ ಸಂಘಗಳು ಸಲ್ಲಿಸಿದ ಮನವಿಗಳ ವಿಲೇವಾರಿ ಬಗ್ಗೆ.

ಉಲ್ಲೇಖ: 1) ಸುತ್ತೋಲೆ ಸಂಖ್ಯೆ: ಸಿಆಸುಇ 11 ಸೇಸವಿ 97 ದಿನಾಂಕ: 16.03.98

2) ಅಧಿಸೂಚನೆ ಸಂಖ್ಯೆ: ಸಿಆಸುಇ 6 ಸೇಸವಿ 2013 ದಿನಾಂಕ: 04.01.2016

******

ಸರ್ಕಾರಿ ನೌಕರರ ಸೇವಾ ಸಂಘಗಳಿಗೆ ಸರ್ಕಾರದ ಮಾನ್ಯತೆಯನ್ನು ನೀಡುವ ಬಗ್ಗೆ ಹಾಗೂ ಅವುಗಳ ನಡತೆಯ ಬಗ್ಗೆ, ಮೇಲೆ ಉಲ್ಲೇಖಿಸಿದ ದಿನಾಂಕ: 04.01.2016ರ ಅಧಿಸೂಚನೆಯಲ್ಲಿ ಹೊರಡಿಸಿರುವ ಕರ್ನಾಟಕ ಸಿವಿಲ್ ಸೇವಾ(ಸೇವಾ ಸಂಘಗಳ ಮಾನ್ಯತೆ) ನಿಯಮಗಳು, 2015ರಲ್ಲಿ ಸೂಚನೆ, ಇತ್ಯಾದಿಗಳನ್ನು ನೀಡಲಾಗಿದೆ.

2. ಮೇಲೆ ಹೇಳಲಾದ ನಿಯಮಗಳ ನಿಯಮ 4 ರ ಐಟಂ(4)ನ್ನು ಈ ಕೆಳಗೆ ಉದ್ಧರಿಸಲಾಗಿದೆ.

> **"All representations by the Service Association shall be submitted through proper channel and shall be addressed to the administrative Secretary to the Government/Head of the organization or Head of the Department or Office.**

3. ಸರ್ಕಾರದ ಮಾನ್ಯತೆ ಪಡೆದ ಸಂಘಗಳು ತಮ್ಮ ಬೇಡಿಕೆಗಳ ಬಗ್ಗೆ ಮನವಿಗಳನ್ನು ನೇರವಾಗಿ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಿಕೊಡತಕ್ಕದ್ದೆಂದು ದಿನಾಂಕ: 16.03.98ರ ಸುತ್ತೋಲೆ ಸಂಖ್ಯೆ: ಸಿಆಸುಇ 11 ಸೇಸವಿ 97 ರಲ್ಲೂ ಸೂಚನೆಗಳನ್ನು ನೀಡಲಾಗಿದೆ. ಆದಾಗ್ಯೂ, ರಾಜ್ಯದ ವಿವಿಧ ಇಲಾಖೆಗಳಲ್ಲಿ ಮಾನ್ಯತೆ ಪಡೆದ ಸಂಘಗಳು ತಮ್ಮ ಬೇಡಿಕೆಗಳ ಬಗ್ಗೆ ಮನವಿಗಳನ್ನು ಸಂಬಂಧಿಸಿದ ಇಲಾಖೆಗಳಿಗೆ ಕಳುಹಿಸುವ ಬದಲು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ನೇರವಾಗಿ ಸಲ್ಲಿಸಿ, ಸಂಪರ್ಕಿಸುವುದು ಸರ್ವೇ ಸಾಮಾನ್ಯವಾಗಿರುತ್ತದೆ. ಇದರ ಪರಿಣಾಮವಾಗಿ, ಇಂತಹ ಮನವಿಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸುವ ಅನಾವಶ್ಯಕ ಕ್ರಮವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಜರುಗಿಸಬೇಕಾಗುತ್ತದೆ. ಆದುದರಿಂದ, ಇನ್ನು ಮುಂದೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ನೇರವಾಗಿ ಸಂಬಂಧಿಸದೇ ಇರುವ ಇಂತಹ ಮನವಿಗಳ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಕ್ರಮ ತೆಗೆದುಕೊಳ್ಳಲಾಗುವುದಿಲ್ಲವೆಂದು ಸೂಚಿಸಿದೆ. ಸರ್ಕಾರದ ಮಾನ್ಯತೆ ಪಡೆದ ಸಂಘಗಳು ಮನವಿಗಳನ್ನು ನೇರವಾಗಿ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಿಕೊಡತಕ್ಕದ್ದು.

(14)

4. ಸರ್ಕಾರದಿಂದ ಮಾನ್ಯತೆ ಪಡೆಯದೇ ಇರುವ ಸಂಘ : ಒಕ್ಕೂಟಗಳೊಂದಿಗೆ ಯಾವ ರೀತಿಯ ಪತ್ರವ್ಯವಹಾರವನ್ನು ಮಾಡತಕ್ಕದ್ದಲ್ಲವೆಂದೂ ಸಹ ಮತ್ತೊಮ್ಮೆ ಸೂಚಿಸಿದೆ.

(ಅನಿಲ್ ಕುಮಾರ್ ಝಾ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ

ಇವರಿಗೆ:

1)ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ಇವರಿಗೆ – ಇಲಾಖೆಗಳ ವ್ಯಾಪ್ತಿಗೊಳಪಡುವ ಎಲ್ಲಾ ಮಾನ್ಯತೆ ಪಡೆದ ಸಂಘಗಳ ಗಮನಕ್ಕೆ ತರಲು.
2) ಎಲ್ಲಾ ಇಲಾಖಾ ಮುಖ್ಯಸ್ಥರು
3) ಎಲ್ಲಾ ಪ್ರಾದೇಶಿಕ ಆಯುಕ್ತರು/ಜಿಲ್ಲಾಧಿಕಾರಿಗಳು
4) ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
5) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.